ಕರ್ನಾಟಕ ವಿಧಾನಸಭೆ

ಬುಧವಾರ 16ನೇ ಸೆಪ್ಟೆಂಬರ್ 2009 ರಂದು ಸದನವು
ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ
ಬೆಳಿಗ್ಗೆ 11 ಗಂಟೆ 5 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರು: ಶ್ರೀ ಜಗದೀಶ್ ಶೆಟ್ಟರ್‌ರವರು ಪೀಠವನ್ನು ಅಲಂಕರಿಸಿದ್ದರು.

(ಸದನವು ಬೆಳಿಗ್ಗೆ 11 ಗಂಟೆ 05 ನಿಮಿಷಕ್ಕೆ ಪ್ರಾರಂಭಗೊಂಡಾಗ ಸನ್ಮಾನ್ಯ ಸಭಾಧ್ಯಕ್ಷರು ಪೀಠವನ್ನು ಅಲಂಕರಿಸಿದ್ದರು)

1. ಶಾಸನ ರಚನೆ:

ಕರ್ನಾಟಕ ವಿಧಾನಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕ 2009

ವಿಧೇಯಕದ ಮಂಡನೆ

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) :– ಮಾನ್ಯ ಅಧ್ಯಕ್ಷರೆ, 2009 ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ ' (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) :– ಮಾನ್ಯ ಅಧ್ಯಕ್ಷರೆ, 2009 ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :– ವಿಧೇಯಕವನ್ನು ಮಂಡಿಸಲಾಗಿದೆ.

ಪ್ರಯೋಜನಾ ಪ್ರಸ್ತಾವ

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ವಿಧಾನಮಂಡಲದವರ

ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಅಧ್ಯಕ್ಷರು:– "ಖಂಡ 2 ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು –: ಪ್ರಸ್ತಾವ ಏನೆಂದರೆ,

"ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) :– ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.